# ಎನ್ಐಟಿಕೆ ಪ್ಲಾಸ್ಟಿಕ್ ಮುಕ್ತ ವಲಯ

**ಮಂಗಳೂರು:** ಸುರತ್ಕಲ್‌ನ ಎನ್‌ಐಟಿಕೆಯಲ್ಲಿ ಸಂಸ್ಥೆಯ ಪ್ರಭಾರಿ ನಿರ್ದೇಶಕ ಪ್ರೊ.ಜಿ.ಸಿ. ಮೋಹನ್ ಕುಮಾರ್ ಧ್ವಜಾರೋಹಣ ನೆರವೇರಿಸಿದರು. ಎನ್‌ಸಿಸಿ ಕೆಡೆಟ್‌ಗಳು, ಎನ್‌ಐಟಿಕೆ ಆಂಗ್ಲ ಹಾಗೂ ಕನ್ನಡ ಮಾಧ್ಯಮ ಶಾಲಾ ಮಕ್ಕಳು, ಭದ್ರತಾ ಸಿಬ್ಬಂದಿ ಭಾಗವಹಿಸಿದ್ದರು.

**» ಪ್ರಭಾರಿ ನಿರ್ದೇಶಕ ಪ್ರೊ.ಜಿ.ಸಿ. ಮೋಹನ್ ಕುಮಾರ್ ಘೋಷಣೆ**

ಬಳಿಕ ನಡೆದ ಸಭಾ ಕಾರ್ಯಕ್ರಮದಲ್ಲಿ ಸಂಸ್ಥೆಯ ಪ್ರಭಾರಿ ನಿರ್ದೇಶಕ ಪ್ರೊ.ಜಿ.ಸಿ.ಮೋಹನ್ ಕುಮಾರ್ ಮಾತನಾಡಿ 'ಎನ್‌ಐಟಿಕೆಯನ್ನು ಪ್ಲಾಸ್ಟಿಕ್ ಮುಕ್ತ ವಲಯ ಎಂದು ಘೋಷಿಸಲಾಗಿದೆ. ಕ್ಯಾಂಪಸ್‌ನಲ್ಲಿ ಇನ್ನು ಮುಂದೆ ಪ್ಲಾಸ್ಟಿಕ್ ವಸ್ತುಗಳು, ಪಾಲಿಥಿನ್ ಮತ್ತು ಆಹಾರ ಪ್ಯಾಕೇಜಿಂಗ್ ವಸ್ತುಗಳು ಲಭ್ಯವಿರುವುದಿಲ್ಲ. ಅದರ ಬದಲು ಜೈವಿಕ ವಿಘಟನೀಯ ಮತ್ತು ಪರಿಸರ ಸ್ನೇಹಿ ಪರ್ಯಾಯಗಳನ್ನು ಅಳವಡಿಸಿಕೊಳ್ಳಲಾಗುವುದು ಎಂದರು.

ಎನ್‌ಐಟಿಕೆಯಲ್ಲಿ ಹಸಿರು ಮತ್ತು ಸುಸ್ಥಿರ ಅಭ್ಯಾಸಗಳ ಅನುಷ್ಠಾನವನ್ನು ಉತ್ತೇಜಿಸಲು ಉನ್ನತ ಮಟ್ಟದಲ್ಲಿ ನಿರ್ಧಾರ್ನ ತೆಗೆದುಕೊಳ್ಳಲಾಗಿದೆ. ಸ್ವಚ್ಛ ಭಾರತ ಮಿಷನ್‌ನ ಬದ್ಧತೆಯ ಭಾಗವಾಗಿ, ಎನ್‌ಐಟಿಕೆ ಆಡಳಿತವು ಸ್ಥಳೀಯ ಮಾರಾಟಗಾರರ ಸಹಯೋಗದೊಂದಿಗೆ ಈ ನಿಷೇಧದ ಅನುಷ್ಠಾನವನ್ನು ಜಾರಿಗೊಳಿಸಿದೆ ಎಂದು ಅವರು ತಿಳಿಸಿದರು.

ಗಣರಾಜ್ಯೋತ್ಸವ ಅಂಗವಾಗಿ ಅತ್ಯುತ್ತಮ ಎನ್‌ಸಿಸಿ ಕೆಡೆಟ್‌ಗಳಿಗೆ, ಭದ್ರತಾ ಸಿಬ್ಬಂದಿಗೆ, ಎನ್‌ಟಿಕೆ ಆಂಗ್ಲ ಹಾಗೂ ಕನ್ನಡ ಮಾಧ್ಯಮ ಶಾಲಾ ಮಕ್ಕಳಿಗೆ ಪ್ರಮಾಣ ಪತ್ರ ಹಾಗೂ ಪ್ರಶಸ್ತಿ ಫಲಕಗಳನ್ನು ವಿತರಿಸಲಾಯಿತು.



ಎನ್‌ಐಟಿಕೆಯಲ್ಲಿ ಸಂಸ್ಥೆಯ ಪ್ರಭಾರಿ ನಿರ್ದೇಶಕ ಪ್ರೊ.ಜಿ.ಸಿ. ಮೋಹನ್ ಕುಮಾರ್ ಧ್ವಜಾರೋಹಣ ನೆರವೇರಿಸಿದರು.

Vijayavani, Date: 27/01/23, p. no - 07